**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | (903) 77 |
| ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 24.08.2026 |

| | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಇತ್ತೀಚೆಗೆ ನಡೆದ ಪರೀಕ್ಷೆಗಳಲ್ಲಿ ಪ್ರಶ್ನೆಪತ್ರಿಕೆ ಮತ್ತು ಉತ್ತರಪತ್ರಿಕೆಗಳ ಸಮರ್ಪಕ ಪೂರೈಕೆಯಾಗದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅವ್ಯವಸ್ಥೆಗೆ ಕಾರಣವೇನು: (ವಿವರ ಒದಗಿಸುವುದು) | ಕೊಪ್ಪಳ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಇತ್ತೀಚೆಗೆ 21 ಸ್ನಾತಕ ಪದವಿ ಕೇಂದ್ರಗಳು (Under Graduation), 4 ಬಿ.ಇಡಿ ಕೇಂದ್ರಗಳು, ಮತ್ತು 4 ಸ್ನಾತಕೋತ್ತರ ಪದವಿ (Post Graduation) ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಿರುತ್ತವೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಪ್ರಶ್ನೆ ಪತ್ರಿಕೆಗಳ ಸಂಖ್ಯೆಗಳನ್ನು ಎರಡು ತಿಂಗಳ ಮೊದಲೇ ತೆಗೆದುಕೊಂಡು ಅದಕ್ಕನುಗುಣವಾಗಿ ಪ್ರಶ್ನೆ ಪತ್ರಿಕೆಗಳನ್ನು ಮತ್ತು ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಕ್ಕೆ ಸರಬರಾಜು ಮಾಡಲಾಗಿರುತ್ತದೆ. ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳ ಕೊರತೆ ಉಂಟಾಗಿರುವ ಬಗ್ಗೆ ಯಾವುದೇ ಪರೀಕ್ಷಾ ಕೇಂದ್ರದಿಂದ ವಿಶ್ವವಿದ್ಯಾಲಯಕ್ಕೆ ದೂರುಗಳು ಬಂದಿರುವುದಿಲ್ಲ. ಮುಂದುವರೆದು ನಿಗದಿತ ಪ್ರಮಾಣದಲ್ಲಿ ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಸರಬರಾಜು ಮಾಡಲಾಗಿರತ್ತದೆ. |
| ಆ) | ಪರೀಕ್ಷಾ ಕೇಂದ್ರಗಳಲ್ಲಿ ಪ್ರಶ್ನೆಪತ್ರಿಕೆ ವಿತರಣೆ, ಉತ್ತರಪತ್ರಿಕೆ ಹಾಗೂ ನೋಂದಣಿ ಸಂಖ್ಯೆಗಳ ನಿರ್ವಹಣೆಯಲ್ಲಿ ಉಂಟಾದ ಗೊಂದಲದಿಂದ ವಿದ್ಯಾರ್ಥಿಗಳು ನಿಗದಿತ ಸಮಯದಲ್ಲಿ ಪರೀಕ್ಷೆ ಬರೆಯಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ವಿದ್ಯಾರ್ಥಿಗಳಿಗೆ ಪರಿಹಾರವಾಗಿ ಕೈಗೊಂಡ ಕ್ರಮವೇನು: (ವಿವರ ಒದಗಿಸುವುದು) | ಸ್ನಾತಕ (Under Graduation) ಮತ್ತು ಬಿ.ಇಡಿ ಪದವಿ ಪರೀಕ್ಷೆಗಳಲ್ಲಿ ಪ್ರಶ್ನೆ ಪತ್ರಿಕೆಗಳ ವಿತರಣೆ ಹಾಗೂ ನೋಂದಣಿ ಸಂಖ್ಯೆ ನಿರ್ವಹಣೆಯಲ್ಲಿ ಯಾವುದೇ ತರಹದ ಗೊಂದಲಗಳು ಉಂಟಾಗಿರುವುದಿಲ್ಲ. ಆದರೆ, ಸ್ನಾತಕೋತ್ತರ ಪರೀಕ್ಷೆಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಪದವಿಯ ಒಂದು ಓಪನ್ ಎಲೆಕ್ಟಿವ್ ಪರೀಕ್ಷೆಯ ಸಮಯದಲ್ಲಿ ಕೊಪ್ಪಳ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿ ಒಂದು ಪರೀಕ್ಷಾ ಕೊಠಡಿಯ 07 ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ನೋಂದಣಿ ಸಂಖ್ಯೆ ನಮೂದಿಸುವಲ್ಲಿ ಸರಿಯಾಗಿ ಮುದ್ರಣವಾಗದ ಕಾರಣ/ ತಾಂತ್ರಿಕ ದೋಷದಿಂದಾಗಿ ಅವುಗಳನ್ನು ಬದಲಾಯಿಸಲು 05 ನಿಮಿಷಗಳ ಕಾಲ ವಿಳಂಬವಾಗಿದ್ದು, ಎಲ್ಲಾ ವಿದ್ಯಾರ್ಥಿಗಳಿಗೆ 10 ನಿಮಿಷಗಳ ಹೆಚ್ಚಿನ ಕಾಲಾವಕಾಶ ನೀಡಿ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಪರೀಕ್ಷಾ ಕಾರ್ಯವನ್ನು ವಿಶ್ವವಿದ್ಯಾಲಯವು ನಿರ್ವಹಿಸಿದೆ. |
| ಇ) | ಕೊಪ್ಪಳ ವಿಶ್ವವಿದ್ಯಾಲಯದ ಪರೀಕ್ಷೆಗಳಲ್ಲಿ ಅಗತ್ಯ ಪ್ರಮಾಣದ ಪ್ರಶ್ನೆಪತ್ರಿಕೆ ಮತ್ತು ಉತ್ತರಪತ್ರಿಕೆಗಳನ್ನು ಮುಂಚಿತವಾಗಿ ಸಿದ್ಧಪಡಿಸದೆ ಕೊರತೆ ಉಂಟಾಗಿರುವುದಕ್ಕೆ ಸಂಬಂಧಿಸಿದ ಅಧಿಕಾರಿಗಳ ನಿರ್ಲಕ್ಷ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ: (ವಿವರ ಒದಗಿಸುವುದು) | (ಅ)ರಲ್ಲಿನಂತೆ |

| | | |
|---|---|---|
| (ಈ) | ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಪರೀಕ್ಷಾ ವ್ಯವಸ್ಥೆಯಲ್ಲಿನ ಇಂತಹ ಲೋಪಗಳಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ತೊಂದರೆಯಾಗದಂತೆ ಪ್ರಶ್ನೆಪತ್ರಿಕೆ ಮುದ್ರಣ, ಸಂಗ್ರಹಣೆ, ವಿತರಣೆ ಮತ್ತು ಪರೀಕ್ಷಾ ಕೇಂದ್ರಗಳ ನಿರ್ವಹಣೆಗೆ ಯಾವುದೇ ಹೊಸ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆಯೇ: (ವಿವರ ಒದಗಿಸುವುದು) | ಕೊಪ್ಪಳ ವಿಶ್ವವಿದ್ಯಾಲಯವು ಈ ಬಾರಿ ಪರೀಕ್ಷಾ ವ್ಯವಸ್ಥೆಯಲ್ಲಿ ಸಾಕಷ್ಟು ಸುಧಾರಣೆಗಳನ್ನು ಅಳವಡಿಸಿಕೊಂಡಿರುತ್ತದೆ.<br><br>• ಸರ್ಕಾರದ UUCMS (Unified University and College Management System) ನ ಡಿಜಿಟಲ್ Module ಅನ್ನು ಸಂಪೂರ್ಣವಾಗಿ ಉಪಯೋಗಿಸಿಕೊಂಡು ಬಿ.ಇಡಿ ಹಾಗೂ ಸ್ನಾತಕೋತ್ತರ(Post Graduate) ಪರೀಕ್ಷೆಗಳ ಮೌಲ್ಯಮಾಪನವನ್ನು Digital Evaluation ಪದ್ಧತಿಯಲ್ಲಿ ಜಾರಿಗೊಳಿಸಿ ವಿಶ್ವವಿದ್ಯಾಲಯದ ಆದಾಯವನ್ನು ಹೆಚ್ಚಿಸಲು ಕ್ರಮ ಕೈಗೊಂಡಿರುತ್ತದೆ.<br>• ಮೊಟ್ಟಮೊದಲ ಬಾರಿಗೆ Flying Squad ನ್ನು ಅಳವಡಿಕೊಂಡು ಪರೀಕ್ಷಾ ನಿರ್ವಹಣೆನ್ನು ಅತ್ಯುತ್ತಮವಾಗಿ ಜರುಗಿಸಲಾಗಿದೆ.<br>• ಈ ಬಾರಿ ವಿಶ್ವವಿದ್ಯಾಲಯವು ಅಧ್ಯಯನ ಮಂಡಳಿಯ BOS (Board of Studies)ಯಲ್ಲಿ ಅನುಮೋದನೆ ಪಡೆದು ತನ್ನದೇ ಆದ ಪಠ್ಯಕ್ರಮವನ್ನು ಹಾಗೂ ಪ್ರಶ್ನೆಪತ್ರಿಕೆ ಮಾದರಿಗಳನ್ನು ಪರಿಚಯಿಸಿ ಪರಿಣಾತ್ಮಕವಾಗಿ ಅನುಷ್ಠಾನಗೊಳಿಸಲಾಗಿರುತ್ತದೆ.<br>• ಭವಿಷ್ಯವರ್ತಿಯಾಗಿ ಜರುಗಲಿರುವ ಎಲ್ಲಾ ಪರೀಕ್ಷೆಗಳಲ್ಲಿ UUCMS ನ OQPDS (Online Question Paper Distribution System) ನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲಾಗುವುದು.<br><br>ದಿನಾಂಕ:22.08.2026ರಂದು ನಡೆದ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಪತಿಗಳ ಸಭೆಯಲ್ಲಿ ಪರೀಕ್ಷಾ ಪದ್ಧತಿಗೆ ಸುಧಾರಣೆಗಳನ್ನು ತರುವ ನಿಟ್ಟಿನಲ್ಲಿ ಚರ್ಚಿಸಲಾಗಿರುತ್ತದೆ. ಈ ಸಂಬಂಧ ಕುಲಪತಿಗಳು ಹಾಗೂ ವಿಷಯ ತಜ್ಞರಿಂದ ಸಲಹೆಗಳನ್ನು ಪಡೆದು ಪರೀಕ್ಷಾ ವ್ಯವಸ್ಥೆಯಲ್ಲಿ ಪರಿಣಾಮಕಾರಿ ಬದಲಾವಣೆಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ಕ್ರಮವಹಿಸಲಾಗುತ್ತದೆ. |
| ಉ) | ಕೊಪ್ಪಳ ವಿಶ್ವವಿದ್ಯಾಲಯದ ಪರೀಕ್ಷಾ ಅವ್ಯವಸ್ಥೆ ಕುರಿತು ಇದುವರೆಗೆ ಎಷ್ಟು ದೂರುಗಳು ಬಂದಿವೆ; ಎಷ್ಟು ವಿದ್ಯಾರ್ಥಿಗಳು ಬಾಧಿತರಾಗಿದ್ದಾರೆ ಹಾಗೂ ಈ ಬಗ್ಗೆ ತನಿಖೆ ನಡೆಸಲಾಗಿದೆಯೇ: ತನಿಖೆಯ ವರದಿ ಆಧರಿಸಿ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು) | ಪ್ರಸ್ತುತ ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ನಡೆಸಿರುವ ಪರೀಕ್ಷಾ ಪದ್ಧಾತಿಯಲ್ಲಿ ಸುಧಾರಿತ ಕ್ರಮಗಳನ್ನು ಅಳವಡಿಸಿಕೊಂಡು ಪರೀಕ್ಷೆಗಳನ್ನು ನಿರ್ವಹಣೆ ಮಾಡಿರುವುದರಿಂದ ಯಾವುದೇ ದೂರುಗಳು ಬಂದಿರುವುದಿಲ್ಲ.<br><br>ಆದಾಗ್ಯೂ ಪರೀಕ್ಷಾ ವ್ಯವಸ್ಥೆಯಲ್ಲಿನ ಲೋಪದೋಷಗಳನ್ನು ಸರಿಪಡಿಸಲು ಮಾನ್ಯ ವಿಧಾನ ಮಂಡಲದ ಸದಸ್ಯರುಗಳ ಅಭಿಪ್ರಾಯ/ಸಲಹೆಗಳನ್ನು ಪಡೆದು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ**: ಇಡಿ 51 ಯುಆರ್‌ಇ 2026

**(ಬಸವರಾಜ ರಾಯರಡ್ಡಿ)**
ಉನ್ನತ ಶಿಕ್ಷಣ ಸಚಿವರು